# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೫<br>Part – V | ಬೆಂಗಳೂರು, ಶುಕ್ರವಾರ, ೨೫, ಅಕ್ಟೋಬರ್, ೨೦೨೪(ಕಾರ್ತೀಕ, ೦೩, ಶಕವರ್ಷ, ೧೯೪೬)<br>BENGALURU, FRIDAY, 25, OCTOBER, 2024(KARTHIKA, 03, SHAKAVARSHA, 1946) | ನಂ. ೫೦೩<br>No. 503 |
|---|---|---|


## ಕರ್ನಾಟಕ ವಿಧಾನ ಸಭೆ
## KARNATAKA LEGISLATIVE ASSEMBLY


**ವಿಧಾನ ಸಭೆ ಸಚಿವಾಲಯ, ಅಂಚೆ ಪೆಟ್ಟಿಗೆ ಸಂ.5074, ವಿಧಾನ ಸೌಧ, ಬೆಂಗಳೂರು-560 001**

**LEGISLATIVE ASSEMBLY SECRETARIAT, P.B.NO.5074, VIDHANA SOUDHA, BENGALURU-560 001.**


### ಅಧಿಸೂಚನೆ

**ಸಂಖ್ಯೆ:ಕವಿಸಸ/ಆ-1/104/ವಿಹುನೇನೇ-2/2024** **ದಿನಾಂಕ/Dated: 25.10.2024**

**ವಿಷಯ: ಕರ್ನಾಟಕ ವಿಧಾನ ಸಭೆ ಸಚಿವಾಲಯದಲ್ಲಿ ಸ್ಥಳೀಯ ವೃಂದದಲ್ಲಿ ಕಲ್ಯಾಣ-ಕರ್ನಾಟಕ ಪ್ರದೇಶದವರಿಗಾಗಿ (ಹೈ-ಕ) ಗುರುತಿಸಲಾದ ವಿವಿಧ ವೃಂದಗಳ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡುವ ಬಗ್ಗೆ.**

***

ಕರ್ನಾಟಕ ವಿಧಾನ ಸಭೆ ಸಚಿವಾಲಯದ ನೇಮಕಾತಿ ಮತ್ತು ಸೇವಾ ಷರತ್ತುಗಳು, ನಿಯಮಗಳು **2003**ರ ನಿಯಮ **6 (viii)**ರ ಅವಕಾಶದಡಿ ಕರ್ನಾಟಕ ವಿಧಾನ ಸಭೆ ಸಚಿವಾಲಯದ ಕೆಳಕಂಡ ವಿವಿಧ ವೃಂದಗಳ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹುದ್ದೆಗಳ ವಿವರಗಳು ಈ ಕೆಳಕಂಡಂತಿರುತ್ತದೆ :

**1.** ಹುದ್ದೆಯ ಹೆಸರು: **ಜ್ಯೂನಿಯರ್ ಪ್ರೋಗ್ರಾಮರ್**

ಹುದ್ದೆಗಳ ಸಂಖ್ಯೆ: **01** ಹುದ್ದೆ

ವೇತನ ಶ್ರೇಣಿ: ರೂ.**69250-1650-74200-1900-85600-2300-99400-2700-115600-3100-134200**

ಮೀಸಲಾತಿ ವರ್ಗೀಕರಣ: **- 01 ಹುದ್ದೆ**

| ಕ್ರ. ಸಂ. | ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗಿಗಳ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|---|
| **1** | ಸಾಮಾನ್ಯ* | **01** | -- | -- | -- | -- | -- | -- | -- | **01** |

* : ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ **27** ಸಹಿಮ **97** ದಿನಾಂಕ**: 07.09.1998**ರನ್ವಯ

**2.** ಹುದ್ದೆಯ ಹೆಸರು: **ವರದಿಗಾರರು**

ಹುದ್ದೆಗಳ ಸಂಖ್ಯೆ: ಕನ್ನಡ ವರದಿಗಾರರು - **03** ಹುದ್ದೆಗಳು

ವೇತನ ಶ್ರೇಣಿ: ರೂ.**61300-1500-64300-1650-74200-1900-85600-2300-99400-2700-112900**

ಮೀಸಲಾತಿ ವರ್ಗೀಕರಣ: **ಬ್ಯಾಕ್‌ಲಾಗ್ - 02 ಹುದ್ದೆಗಳು**

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| 1 | ಪ.ಜಾ. | 01 | -- | -- | -- | -- | -- | 01 |
| 2 | ಪ.ಪಂ. | 01 | -- | -- | -- | -- | -- | 01 |

ಮೀಸಲಾತಿ ವರ್ಗೀಕರಣ – **ಬ್ಯಾಕ್‌ಲಾಗ್ 01 ಹುದ್ದೆ**

| ಕ್ರ. ಸಂ. | ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗಿಗಳ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|---|
| 1 | ಪ.ಜಾ. | 01 | -- | -- | -- | -- | -- | -- | -- | 01 |

**3.** ಹುದ್ದೆಯ ಹೆಸರು: **ಕಂಪ್ಯೂಟರ್ ಆಪರೇಟರ್**

ಹುದ್ದೆಗಳ ಸಂಖ್ಯೆ: **01** ಹುದ್ದೆ

ವೇತನ ಶ್ರೇಣಿ: ರೂ.**49050-1250-52800-1375-58300-1500-64300-1650-74200-1900-85600-2300-92500**

ಮೀಸಲಾತಿ ವರ್ಗೀಕರಣ – **01 ಹುದ್ದೆ**

| ಕ್ರ. ಸಂ. | ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗಿಗಳ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|---|
| 1 | ಪ.ಜಾ. | 01 | -- | -- | -- | -- | -- | -- | -- | 01 |

**4.** ಹುದ್ದೆಯ ಹೆಸರು: **ಕಿರಿಯ ಸಹಾಯಕರು**

ಹುದ್ದೆಗಳ ಸಂಖ್ಯೆ: **01** ಹುದ್ದೆ

ವೇತನ ಶ್ರೇಣಿ: ರೂ.**34100-800-35700-900-39300-1000-43300-1125-47800-1250-52800-1375-58300-1500-64300-1650-67600**

ಮೀಸಲಾತಿ ವರ್ಗೀಕರಣ – **01 ಹುದ್ದೆ**

| ಕ್ರ. ಸಂ. | ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗಿಗಳ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|---|
| 1 | ಪ.ಜಾ. | 01 | -- | -- | -- | -- | -- | -- | -- | 01 |

5. ಹುದ್ದೆಯ ಹೆಸರು: **ಕಿರಿಯ ಗ್ರಂಥಾಲಯ ಸಹಾಯಕರು**

ಹುದ್ದೆಗಳ ಸಂಖ್ಯೆ: **01** ಹುದ್ದೆ

ವೇತನ ಶ್ರೇಣಿ: ರೂ.**34100-800-35700-900-39300-1000-43300-1125-47800-1250-52800-1375 -58300-1500-64300-1650-67600**

ಮೀಸಲಾತಿ ವರ್ಗೀಕರಣ **– 01 ಹುದ್ದೆ**

| ಕ್ರ. ಸಂ. | ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗಿಗಳ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|---|
| 1 | ಸಾಮಾನ್ಯ* | 01 | -- | -- | -- | -- | -- | -- | -- | 01 |

* : ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ **27** ಸಹಿಮ **97** ದಿನಾಂಕ**: 07.09.1998**ರನ್ವಯ

6. ಹುದ್ದೆಯ ಹೆಸರು: **ಮಸಾಜರ್**

ಹುದ್ದೆಗಳ ಸಂಖ್ಯೆ: **01** ಹುದ್ದೆ

ವೇತನ ಶ್ರೇಣಿ: ರೂ.**29600-725-32500-800-35700-900-39300-1000-43300-1125-47800-1250-52800**

ಮೀಸಲಾತಿ ವರ್ಗೀಕರಣ **– 01 ಹುದ್ದೆ**

| ಕ್ರ. ಸಂ. | ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗಿಗಳ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|---|
| 1 | ಸಾಮಾನ್ಯ* | 01 | -- | -- | -- | -- | -- | -- | -- | 01 |

* : ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ **27** ಸಹಿಮ **97** ದಿನಾಂಕ**: 07.09.1998**ರನ್ವಯ

7. ಹುದ್ದೆಯ ಹೆಸರು: **ಬಡಗಿ**

ಹುದ್ದೆಗಳ ಸಂಖ್ಯೆ: **01** ಹುದ್ದೆ

ವೇತನ ಶ್ರೇಣಿ: ರೂ.**29600-725-32500-800-35700-900-39300-1000-43300-1125-47800-1250-52800**

ಮೀಸಲಾತಿ ವರ್ಗೀಕರಣ **– 01 ಹುದ್ದೆ**

| ಕ್ರ. ಸಂ. | ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗಿಗಳ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|---|
| 1 | ಸಾಮಾನ್ಯ* | 01 | -- | -- | -- | -- | -- | -- | -- | 01 |

* : ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ **27** ಸಹಿಮ **97** ದಿನಾಂಕ**: 07.09.1998**ರನ್ವಯ

**8.** ಹುದ್ದೆಯ ಹೆಸರು: **ದಲಾಯತ್**

ಹುದ್ದೆಗಳ ಸಂಖ್ಯೆ: **01** ಹುದ್ದೆ

ವೇತನ ಶ್ರೇಣಿ: ರೂ.**27000-650-29600-725-32500-800-35700-900-39300-1000-43300-1125-46675**

ಮೀಸಲಾತಿ ವರ್ಗೀಕರಣ **– 01 ಹುದ್ದೆ**

| ಕ್ರ. ಸಂ. | ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗಿಗಳ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|---|
| 1 | ಪ.ಜಾ. | 01 | -- | -- | -- | -- | -- | -- | -- | 01 |

**9.** ಹುದ್ದೆಯ ಹೆಸರು: **ಸ್ವೀಪರ್**

ಹುದ್ದೆಗಳ ಸಂಖ್ಯೆ: **03** ಹುದ್ದೆಗಳು

ವೇತನ ಶ್ರೇಣಿ: ರೂ.**27000-650-29600-725-32500-800-35700-900-39300-1000-43300-1125-46675**

ಮೀಸಲಾತಿ ವರ್ಗೀಕರಣ **– 03 ಹುದ್ದೆಗಳು**

| ಕ್ರ. ಸಂ. | ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗಿಗಳ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|---|
| 1 | ಪ.ಜಾ. | 01 | -- | -- | -- | -- | -- | -- | -- | 01 |
| 2 | ಸಾಮಾನ್ಯ | 01 | -- | -- | -- | -- | -- | -- | -- | 01 |
| 3 | ಪ.ಪಂ | 01 | -- | -- | -- | -- | -- | -- | -- | 01 |

1. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25.11.2024.**
2. ಅರ್ಜಿ ಸಲ್ಲಿಸಬೇಕಾದ ವಿಳಾಸ: ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಸಚಿವಾಲಯ, ಅಂಚೆ ಪೆಟ್ಟಿಗೆ ಸಂಖ್ಯೆ:**5074,** ಮೊದಲನೆ ಮಹಡಿ, ವಿಧಾನ ಸೌಧ, ಬೆಂಗಳೂರು-**560 001.**
3. ಕರ್ನಾಟಕ ವಿಧಾನ ಸಭೆ ಸಚಿವಾಲಯದ ನೇಮಕಾತಿ ಹಾಗೂ ಸೇವಾ ಷರತ್ತುಗಳು, ನಿಯಮಗಳು 2003ರ ಅನುಸಾರ ಮೇಲ್ಕಂಡ ಹುದ್ದೆಗಳ ಭರ್ತಿಗಾಗಿ ಅರ್ಹತೆಯುಳ್ಳ ಅಭ್ಯರ್ಥಿಗಳು ಅರ್ಜಿ ನಮೂನೆ-1ರ ದ್ವಿಪ್ರತಿಯಲ್ಲಿ **ಅರ್ಜಿಗಳನ್ನು ಸರ್ಕಾರಿ ಪುಸ್ತಕ ಮಳಿಗೆಯಿಂದ ಪಡೆದು** ವಿಧಾನ ಸಭೆ ಸಚಿವಾಲಯಕ್ಕೆ ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಲ್ಲಿಸಬೇಕು. **(ಅರ್ಜಿ ನಮೂನೆಯು ಸರ್ಕಾರಿ ಮುದ್ರಣಾಲಯದಲ್ಲಿ ದೊರೆಯುವುದು).**
4. ವಿದ್ಯಾರ್ಹತೆ: ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳು 1977ರ ಪ್ರಕಾರ ಅಭ್ಯರ್ಥಿಗಳು ನೇರ ನೇಮಕಾತಿಗೆ ಅರ್ಹತೆಯನ್ನು ಪಡೆದಿರಬೇಕು ಹಾಗೂ ಅವನು/ಅವಳು ಕೆಳಗೆ ತಿಳಿಸಿರುವ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು:

| ಕ್ರ.ಸಂ. | ಹುದ್ದೆಯ ಹೆಸರು | ವಿದ್ಯಾರ್ಹತೆ |
|---|---|---|
| 1 | ಜ್ಯೂನಿಯರ್ ಪ್ರೋಗ್ರಾಮರ್ | 1) ಮಾನ್ಯತೆ ಪಡೆದಿರುವ ವಿಶ್ವವಿದ್ಯಾಲಯದಿಂದ ಕಂಪ್ಯೂಟರ್ ಸೈನ್ಸ್ / ಮಾಹಿತಿ ವಿಜ್ಞಾನ / ಎಲೆಕ್ಟ್ರಾನಿಕ್ಸ್ ಇಂಜಿನೀಯರಿಂಗ್ ನಲ್ಲಿ ಪದವೀಧರರಾಗಿರಬೇಕು ಅಥವಾ ಕಂಪ್ಯೂಟರ್ ಅಪ್ಲಿಕೇಶನ್ (MCA) ನಲ್ಲಿ ಸ್ನಾತಕೋತ್ತರ ಪದವಿ ಹೊಂದಿದ್ದು hardware and softwareಗಳ ಜ್ಞಾನವುಳ್ಳವರಾಗಿರಬೇಕು.<br>2) Must have a minimum experience of one year as programmer with working knowledge of VB6, VB.Net, Oracle, SQL-Server, MS-Access, Crystal Reports and Networking. |
| 2 | ಕನ್ನಡ ವರದಿಗಾರರು | 1. ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿ ಹೊಂದಿರಬೇಕು.<br>2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸಿರುವ ಪ್ರವೀಣ ದರ್ಜೆಯ ಕನ್ನಡ ಶೀಘ್ರಲಿಪಿ ಹಾಗೂ ಪ್ರೌಢ ದರ್ಜೆಯ ಕನ್ನಡ ಬೆರಳಚ್ಚು ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು. ಹಿಂದಿ ಪ್ರವೀಣ ದರ್ಜೆಯ ಶೀಘ್ರಲಿಪಿಯಲ್ಲಿ ಉತ್ತೀರ್ಣರಾದವರಿಗೆ ಆದ್ಯತೆ ನೀಡಲಾಗುವುದು. |
| 3 | ಕಂಪ್ಯೂಟರ್ ಆಪರೇಟರ್ | ಅಂಗೀಕೃತ ವಿಶ್ವವಿದ್ಯಾಲಯದಿಂದ ಕಂಪ್ಯೂಟರ್ ಅಪ್ಲಿಕೇಷನ್ನಲ್ಲಿ ಸ್ನಾತಕ ಪದವಿ (ಬಿ.ಸಿ.ಎ.) ಅಥವಾ ಕಂಪ್ಯೂಟರ್ ಸೈನ್ಸ್ ಅಥವಾ ಎಲೆಕ್ಟ್ರಾನಿಕ್ಸ್ ನಲ್ಲಿ ಬಿ.ಎಸ್ಸಿ. ಪದವಿ ಹೊಂದಿರಬೇಕು. |
| 4 | ಕಿರಿಯ ಸಹಾಯಕರು | 1. ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿ ಹೊಂದಿರಬೇಕು ಹಾಗೂ ಗಣಕಯಂತ್ರದ ಸಾಮಾನ್ಯ ಜ್ಞಾನವುಳ್ಳವಾಗಿರಬೇಕು.<br>2. ಕರ್ನಾಟಕ ವಿಧಾನ ಸಭೆ ಸಚಿವಾಲಯದ ಗ್ರೂಪ್ 'ಡಿ' ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದು, ಅಂಗೀಕೃತ ವಿಶ್ವವಿದ್ಯಾಲಯದಿಂದ ಸ್ನಾತಕ ಪದವಿ ಹೊಂದಿರುವ ನೌಕರರಿಗೆ ಆದ್ಯತೆ ನೀಡಲಾಗುವುದು. |
| 5 | ಕಿರಿಯ ಗ್ರಂಥಾಲಯ ಸಹಾಯಕರು | ಅಂಗೀಕೃತ ವಿಶ್ವವಿದ್ಯಾಲಯದಿಂದ ಲೈಬ್ರರಿ ಸೈನ್ಸ್ ನಲ್ಲಿ ಪದವಿ ಹೊಂದಿದ್ದು ಗಣಕ ಯಂತ್ರದ ಜ್ಞಾನವುಳ್ಳವಾಗಿರಬೇಕು. |
| 6 | ಮಸಾಜರ್ | 1. ಏಳನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು<br>2. ಯಾವುದಾದರು ಹೆಲ್ತ್ ಕ್ಲಬ್ ನಲ್ಲಿ ಮಸಾಜರ್ ಆಗಿ ಕಾರ್ಯ-ನಿರ್ವಹಿಸಿರುವ ಬಗ್ಗೆ ಐದು ವರ್ಷಗಳ ಅನುಭವವಿರಬೇಕು |
| 7 | ಬಡಗಿ | ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಮಾನ್ಯತೆ ಪಡೆದಿರುವ ಸಂಸ್ಥೆಯಿಂದ ಬಡಗಿ ಕೋರ್ಸ್‌ನ ಅಥವಾ ಜಿಲ್ಲಾ ಕೈಗಾರಿಕಾ ತರಬೇತಿ ಕೇಂದ್ರದಿಂದ ಅಥವಾ ಕೈಗಾರಿಕಾ ಸಂಸ್ಥೆಯ (ಐ.ಟಿ.ಐ.)ಯಿಂದ ಪ್ರಮಾಣ ಪತ್ರ ಹೊಂದಿರಬೇಕು. |
| 8 | ದಲಾಯತ್ | 7ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು |
| 9 | ಸ್ವೀಪರ್ | 4ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು |

5. **ವಯೋಮಿತಿ:** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ **18** ವರ್ಷ ವಯಸ್ಸನ್ನು ಪೂರೈಸಿರಬೇಕು.

ಗರಿಷ್ಠ ವಯೋಮಿತಿ:

| | | |
|---|---|---|
| ಸಾಮಾನ್ಯ ವರ್ಗ | : | **35** ವರ್ಷಗಳು |
| ಪ್ರವರ್ಗ **II**ಎ, **II**ಬಿ, **III**ಎ ಮತ್ತು **III**ಬಿ | : | **38** ವರ್ಷಗಳು |
| ಪ.ಜಾ./ಪ.ಪಂ./ಪ್ರವರ್ಗ-**1** | : | **40** ವರ್ಷಗಳು |

**ವಿಶೇಷ ಸೂಚನೆ : ಗ್ರೂಪ್-ಸಿ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 166 ಸೆನೆನಿ 2024, ದಿನಾಂಕ: 10.09.2024ರಲ್ಲಿ ಆದೇಶಿಸಿರುವಂತೆ ಮೇಲೆ ತಿಳಿಸಿರುವ ಗರಿಷ್ಠ ವಯೋಮಿತಿಗೆ 03 ವರ್ಷಗಳ ಸಡಿಲಿಕೆಯನ್ನು ನೀಡಿದೆ. ವಯೋಮಿತಿ ಸಡಿಲಿಕೆಯು ಈ ಒಂದು ಬಾರಿಗೆ ಮಾತ್ರ ಸೀಮಿತವಾಗಿದೆ.**

6. ಸರ್ಕಾರಿ ಇಲಾಖೆಗಳಲ್ಲಿ ಈಗಾಗಲೇ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಗಳನ್ನು ತಮ್ಮ ನೇಮಕಾತಿ ಪ್ರಾಧಿಕಾರದ ಮೂಲಕ ಅನುಬಂಧ-ಡಿ ಪ್ರಮಾಣಪತ್ರದೊಂದಿಗೆ ನಿಗದಿತ ದಿನಾಂಕದೊಳಗೆ ಅರ್ಜಿ ಸಲ್ಲಿಸಬೇಕು.

7. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳು **1977**ರ ಪ್ರಕಾರ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಹಾಗೂ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಕಲ್ಯಾಣ ಕರ್ನಾಟಕ ಪ್ರದೇಶ) (ಅರ್ಹತಾ ಪ್ರಮಾಣಪತ್ರಗಳ ನೀಡಿಕೆ) ನಿಯಮಗಳು, **2013** (**2021**ರವರೆಗೆ ತಿದ್ದುಪಡಿಯಂತೆ) ರನ್ವಯ ನೇಮಕಾತಿ ಹೊಂದಲು ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಮಾತ್ರ ನೇಮಕಾತಿಗೆ ಅರ್ಹರಾಗಿರುತ್ತಾರೆ.

8. ಅರ್ಹತಾ ಷರತ್ತುಗಳು :

   **(1)** ಭಾರತೀಯ ನಾಗರೀಕನಾಗಿರತಕ್ಕದ್ದು;

   **(2)** ಆಯ್ಕೆಯಾದ ಯಾವುದೇ ಅಭ್ಯರ್ಥಿಯು, ನೇಮಕಾತಿ ಪ್ರಾಧಿಕಾರಕ್ಕೆ ಅವನು/ಅವಳು ಆಯ್ಕೆಗೊಂಡ ಹುದ್ದೆಗೆ ದೈಹಿಕವಾಗಿ ಹಾಗೂ ಮಾನಸಿಕವಾಗಿ ಯೋಗ್ಯವೆನಿಸಿದ ಹೊರತು ಅವನನ್ನು/ಅವಳನ್ನು ಆ ಹುದ್ದೆಗೆ ನೇಮಿಸಲಾಗುವುದಿಲ್ಲ;

   **(3)** ಕಾನೂನಿನ ಪ್ರಕಾರ ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

9. ಯಾವುದೇ ವ್ಯಕ್ತಿಯು ತನ್ನ **ಉಮೇದುವಾರಿಕೆ** ಬಗ್ಗೆ ಅಧಿಕಾರಿಗಳು ಮತ್ತು ಅಧಿಕಾರೇತರರುಗಳಿಂದ ಯಾವುದೇ ರೀತಿಯ ಒತ್ತಡ/ ಶಿಫಾರಸ್ಸು ತಂದಲ್ಲಿ ಅಂತಹ ಅಭ್ಯರ್ಥಿಗಳು ಸದರಿ ಹುದ್ದೆಯ ನೇಮಕಾತಿಗೆ ಅನರ್ಹರಾಗಿರುತ್ತಾರೆ.

10. ಶುಲ್ಕ: ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-**1**ರ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ ಇರುವುದಿಲ್ಲ. ಉಳಿದ ಸಾಮಾನ್ಯ ವರ್ಗದ ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಕ್ರಾಸ್ ಮಾಡಿದ ರೂ.**500/-**ರ ಇಂಡಿಯನ್ ಪೋಸ್ಟಲ್ ಆರ್ಡರ್ ಅನ್ನು ಈ ಅಧಿಸೂಚನೆ ಹೊರಡಿಸಿರುವ ದಿನಾಂಕದಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಿರುವಂತೆ **ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ ಸಚಿವಾಲಯ, ಮೊದಲನೆ ಮಹಡಿ, ವಿಧಾನಸೌಧ, ಬೆಂಗಳೂರು-560 001, ಇವರ ಹೆಸರಿನಲ್ಲಿ ಖರೀದಿಸಿ,** ಅರ್ಜಿಯಲ್ಲಿ ವಿವರದೊಂದಿಗೆ ಲಗತ್ತಿಸತಕ್ಕದ್ದು, ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

11. ಅಭ್ಯರ್ಥಿಗಳು ಅರ್ಜಿಯೊಂದಿಗೆ ಈ ಕೆಳಗೆ ತಿಳಿಸಲಾಗಿರುವ ದಾಖಲೆಗಳ ಜೆರಾಕ್ಸ್ ಪ್ರತಿಗಳನ್ನು ದ್ವಿಪ್ರತಿಗಳಲ್ಲಿ ತಪ್ಪದೇ ಲಗತ್ತಿಸಬೇಕು:

(ಅ) ಕರ್ನಾಟಕ ಸಾರ್ವಜನಿಕ ಉದ್ಯೋಗ(ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಕಲ್ಯಾಣ ಕರ್ನಾಟಕ ಪ್ರದೇಶ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು, 2013 (2021ರವರೆಗೆ ತಿದ್ದುಪಡಿಯಂತೆ) ರನ್ವಯ ಅನ್ವಯಿಸುವ ಅನುಬಂಧಗಳು.

(ಆ) ಹುಟ್ಟಿದ ತಾರೀಖಿನ ಆಧಾರದ ದಾಖಲೆ ಪ್ರತಿ

(ಇ) ಹುದ್ದೆಗಳಿಗೆ ಸೂಚಿಸಲಾಗಿರುವ ವಿದ್ಯಾರ್ಹತೆಗಳಿಗೆ ಸಂಬಂಧಿಸಿದಂತೆ ಅಂಕಪಟ್ಟಿಗಳ ಹಾಗೂ ಪ್ರಮಾಣ ಪತ್ರಗಳ ನಕಲು ಪ್ರತಿ ಮತ್ತು ಇತರೆ ವಿದ್ಯಾರ್ಹತೆಯ ಪ್ರಮಾಣಪತ್ರದ ನಕಲು ಪ್ರತಿ.

(ಈ) ಅರ್ಜಿ ನಮೂನೆಯಲ್ಲಿ ನಿಗದಿಪಡಿಸಿರುವಂತೆ ನಡತೆಯ (conduct) ಬಗ್ಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪತ್ರಾಂಕಿತ ಅಧಿಕಾರಿಗಳು, ವೈದ್ಯಾಧಿಕಾರಿಗಳು, ಶಾಲಾ ಮುಖ್ಯೋಪಾಧ್ಯಾಯರುಗಳು, ಪ್ರಾಂಶುಪಾಲರು, ರಾಜ್ಯ ಸಭೆ ಮತ್ತು ಲೋಕ ಸಭೆ ಸದಸ್ಯರು, ವಿಧಾನ ಸಭೆ ಮತ್ತು ವಿಧಾನ ಪರಿಷತ್ ಸದಸ್ಯರು, ಇವರುಗಳಲ್ಲಿ ಯಾರೇ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ (ಸಹಿ ಹಾಗೂ ಮೊಹರಿನೊಂದಿಗೆ) ಇತ್ತೀಚಿನ ಅಂದರೆ ಆರು ತಿಂಗಳ ಅವಧಿ ಮೀರದ ನಡತೆ ಪ್ರಮಾಣಪತ್ರಗಳು ಹಾಗೂ ಶಾಲಾ ನಡವಳಿಕೆ ಪ್ರಮಾಣಪತ್ರ ಸಲ್ಲಿಸತಕ್ಕದ್ದು.

(ಉ) ಜಾತಿ / ಪ್ರವರ್ಗ ದೃಢೀಕರಿಸುವ ಪ್ರಮಾಣಪತ್ರದ ನಕಲು ಪ್ರತಿಯನ್ನು ಸರ್ಕಾರದಿಂದ ನಿಗದಿಪಡಿಸಿರುವ ನಮೂನೆಯಲ್ಲಿ ಸಲ್ಲಿಸತಕ್ಕದ್ದು.

(ಊ) 1 ರಿಂದ 10 ನೇ ತರಗತಿಯವರೆಗೆ ಕನ್ನಡ ಮಾಧಮದಲ್ಲಿ/ಗ್ರಾಮಾಂತರ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿದ್ದಕ್ಕಾಗಿ ಸಂಬಂಧಪಟ್ಟ ಶಿಕ್ಷಣಾಧಿಕಾರಿಗಳಿಂದ ಪಡೆದ ದೃಢೀಕರಣ ಪ್ರಮಾಣಪತ್ರ

12. ಅರ್ಜಿಗಳನ್ನು ನಮೂನೆ 1ರ ದ್ವಿಪ್ರತಿಯಲ್ಲಿ ಅಗತ್ಯವುಳ್ಳ ದಾಖಲೆಗಳನ್ನು ಲಗತ್ತಿಸಿ, ಕೊನೆಯ **ದಿನಾಂಕ:25.11.2024** ರ **ಸಂಜೆ 4.00** ಗಂಟೆಯ ಒಳಗಾಗಿ ಖುದ್ದಾಗಿ (ಕೊಠಡಿ ಸಂಖ್ಯೆ: 119A, ಪತ್ರ ಸ್ವೀಕಾರ ಮತ್ತು ರವಾನೆ ಶಾಖೆ, 1ನೇ ಮಹಡಿ, ವಿಧಾನ ಸೌಧ, ಬೆಂಗಳೂರು) ಅಥವಾ ಅಂಚೆಯ ಮೂಲಕ ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನ ಸೌಧ, ಬೆಂಗಳೂರು ಇವರಿಗೆ ತಲುಪಿಸತಕ್ಕದ್ದು. ಸದರಿ ದಿನಾಂಕವು ಸಾರ್ವಜನಿಕ ರಜಾ ದಿನವಾದಲ್ಲಿ ಮುಂದಿನ ಕೆಲಸದ ದಿನದಂದು ಅರ್ಜಿಯನ್ನು ಸಲ್ಲಿಸತಕ್ಕದ್ದು.

13. ಕರ್ನಾಟಕ ವಿಧಾನಸಭೆ ಸಚಿವಾಲಯದ ನೇಮಕಾತಿ ಮತ್ತು ಸೇವಾ ಷರತ್ತುಗಳು, ನಿಯಮಾವಳಿಗಳು, 2003ರ ರೀತ್ಯಾ ಹುದ್ದೆಗಳ ಆಯ್ಕೆ ಪ್ರಕ್ರಿಯೆಯ ಕಾರ್ಯ ವಿಧಾನವನ್ನು ನಿಗದಿಪಡಿಸುವ ಅಧಿಕಾರ ಮಾನ್ಯ ಸಭಾಧ್ಯಕ್ಷರವರಿಗೆ ಇರುತ್ತದೆ.

14. ಆಯ್ಕೆಯಾಗಲಿರುವ ಅಭ್ಯರ್ಥಿಯ ನೇಮಕಾತಿ ಕುರಿತು ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ಯಾವುದಾದರೂ ಕ್ರಿಮಿನಲ್ ಮೊಕದ್ದಮೆಗಳು ದಾಖಲಾಗಿವೆಯೇ ಎಂಬ ಬಗ್ಗೆ ಪೊಲೀಸ್ ಪರಿಶೀಲನೆ (Police Verification), ದೃಢೀಕರಣ ಪತ್ರ ಹಾಗೂ ಜಾತಿ ಪ್ರಮಾಣಪತ್ರದ ಸಿಂಧುತ್ವ, ಕಲ್ಯಾಣ-ಕರ್ನಾಟಕ ಪ್ರದೇಶದ ಪ್ರಮಾಣ ಪತ್ರದ ಸಿಂಧುತ್ವ ಮತ್ತು ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿಗಳ ನೈಜತೆಗೆ ಒಳಪಟ್ಟಿರುತ್ತದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**ಸೂಚನೆ:**

1. **ಅರ್ಜಿಗಳ ಮೇಲೆ ಹುದ್ದೆಯ ಹೆಸರನ್ನು ಹಾಗೂ ಅರ್ಜಿದಾರರ ಹೆಸರು, ತಂದೆಯ ಹೆಸರು ಮತ್ತು ಸರಿಯಾದ ಅಂಚೆ ವಿಳಾಸವನ್ನು, e-Mail ಮತ್ತು ಮೊಬೈಲ್ ಸಂಖ್ಯೆಯನ್ನು ದಪ್ಪ ಅಕ್ಷರಗಳಲ್ಲಿ ನಮೂದಿಸತಕ್ಕದ್ದು,**
2. **ಅಭ್ಯರ್ಥಿಗಳು ಅರ್ಜಿಯ ಮೇಲೆ ಅಧಿಸೂಚನೆ ರೀತ್ಯಾ ಯಾವ ಮೀಸಲಾತಿಯಡಿ ಅರ್ಜಿ ಸಲ್ಲಿಸಲಾಗುತ್ತಿದೆಯೋ ಆ ಮೀಸಲಾತಿ ವರ್ಗೀಕರಣವನ್ನು ಸ್ಪಷ್ಟವಾಗಿ ಮತ್ತು ದಪ್ಪ ಅಕ್ಷರಗಳಲ್ಲಿ ನಮೂದಿಸತಕ್ಕದ್ದು,**
3. ಅರ್ಜಿಯನ್ನು ಸಲ್ಲಿಸಲು ನೀಡಿರುವ ಕಾಲಾವಧಿಯು ಸರ್ಕಾರಿ ಇಲಾಖೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಸೇರಿದಂತೆ ಎಲ್ಲಾ ಅಭ್ಯರ್ಥಿಗಳಿಗೂ ಅನ್ವಯವಾಗುವುದು.
4. ಅಗತ್ಯ ಪ್ರಮಾಣಪತ್ರಗಳನ್ನು ಲಗತ್ತಿಸದೆ ಇರುವ, ಲೋಪದಿಂದ ಕೂಡಿರುವ ಅರ್ಜಿಗಳನ್ನು, ಅಪೂರ್ಣ ಅರ್ಜಿಗಳನ್ನು ಹಾಗೂ ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
5. ಅಭ್ಯರ್ಥಿಗಳು ಮೂಲ ಪ್ರಮಾಣಪತ್ರಗಳನ್ನು ಲಗತ್ತಿಸಬಾರದು.
6. ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಿದ ನಂತರ ಆ ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

ಸಭಾಧ್ಯಕ್ಷರ ಆದೇಶಾನುಸಾರ,

ಎಂ. ಕೆ. ವಿಶಾಲಾಕ್ಷಿ
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ ಸಚಿವಾಲಯ.

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH